## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪರಿಶಿಷ್ಟ ಪಂಗಡದ ಮೀಸಲಾತಿ ಪಟ್ಟಿಗೆ ಸೇರ್ಪಡೆಯಾಗಿರುವ 'ತಳವಾರ' ಮತ್ತು 'ಪರಿವಾರ' ಜಾತಿಗಳನ್ನು ರಾಜ್ಯದ ಹಿಂದುಳಿದ ವರ್ಗಗಳ ಮೀಸಲಾತಿ ಜಾತಿ ಪಟ್ಟಿಯಿಂದ ಕೈಬಿಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30.03.2002.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 180 ಎಸ್ಎಡಿ 2020(ಭಾ) ದಿನಾಂಕ:29.01.2022
3. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಇವರ ಪತ್ರ ಸಂಖ್ಯೆ:ಕರಾಹಿಂವಆ/ಜಾಮದೂ-1/ಸಿಆರ್-28/2021-22, ದಿನಾಂಕ:23.05.2022

* * * * *

**ಪ್ರಸ್ತಾವನೆ:**

ಮೇಲೆ ಕ್ರ.ಸಂ:(1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಭಾರತ ಸಂವಿಧಾನದ ಅನುಚ್ಛೇಧ 15(4)ರಂತೆ ವಿದ್ಯಾಸಂಸ್ಥೆಗಳಲ್ಲಿ ಪ್ರವೇಶ ಮತ್ತು ಅನುಚ್ಛೇಧ 16(4)ರ ಮೇರೆಗೆ ನೇಮಕಾತಿಗಳಲ್ಲಿ ಹಿಂದುಳಿದ ವರ್ಗಗಳಿಗೆ ಮೀಸಲಾತಿ ಸೌಲಭ್ಯ ಕಲ್ಪಿಸಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ: 30-3-2002ರ ಪ್ರವರ್ಗ-'1'ರ ಕ್ರಮ ಸಂಖ್ಯೆ: 88(ಹೆಚ್) ನಲ್ಲಿ ತಳವಾರ (Talawara) ಮತ್ತು 88(ಕೆ) ನಲ್ಲಿ ಪರಿವಾರ ನಾಯಕ (Parivara Nayaka)ಜಾತಿಗಳಿಗೆ ಮೀಸಲಾತಿ ಕಲ್ಪಿಸಲಾಗಿರುತ್ತದೆ.

ಮೇಲೆ ಕ್ರ.ಸಂ:(2)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ, ಭಾರತ ಸರ್ಕಾರದ ದಿನಾಂಕ: 20/03/2020ರ The Gazette of India ಅಧಿಸೂಚನೆಯನ್ವಯ, THE CONSTITUTION (SCHEDULED TRIBES) ORDERS (AMENDMENT) ACT, 2020 ರಲ್ಲಿ ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿನ ಕ್ರ.ಸಂ: 38ರಲ್ಲಿ Parivara ಮತ್ತು Talawara ಜಾತಿಗಳನ್ನು ಸೇರಿಸಿರುವ ಹಿನ್ನೆಲೆಯಲ್ಲಿ, ಸದರಿ ಜಾತಿಗಳಿಗೆ ಸರ್ಕಾರವು ಪರಿಶಿಷ್ಟ ಪಂಗಡದ ಪ್ರಮಾಣಪತ್ರಗಳನ್ನು ವಿತರಿಸಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ /ತಹಶೀಲ್ದಾರರಿಗೆ ನಿರ್ದೇಶಿಸಲಾಗಿರುತ್ತದೆ.

ಮೇಲೆ ಕ್ರ.ಸಂ:(3)ರಲ್ಲಿ ಓದಲಾದ ಪತ್ರದಲ್ಲಿ, ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಇವರು, ದಿ: 17.05.2022ರಂದು ಜರುಗಿದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ 221ನೇ ಸಭೆಯಲ್ಲಿ ಹಿಂದುಳಿದ ವರ್ಗಗಳ ಪಟ್ಟಿಯಿಂದ ಪ್ರವರ್ಗ-1ರ ಕ್ರಮ ಸಂಖ್ಯೆ 88(ಹೆಚ್) ರಲ್ಲಿರುವ ತಳವಾರ (Talawara) ಜಾತಿಯನ್ನು ಹಾಗೂ ಕ್ರಮ ಸಂಖ್ಯೆ 88(ಕೆ) ರಲ್ಲಿರುವ ಪರಿವಾರ ನಾಯಕ (Parivara Nayaka) ಜಾತಿಗಳನ್ನು ತೆಗೆದುಹಾಕಲು ಸರ್ವಾನುಮತದಿಂದ ತೀರ್ಮಾನಿಸಲಾಗಿದ್ದು, ಅದರಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

***2

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಹಿಂವಕ 26 ಬಿಸಿಎ 2022,**
**ಬೆಂಗಳೂರು, ದಿನಾಂಕ: 29.10.2022.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಹಿಂದುಳಿದ ವರ್ಗಗಳ ಮೀಸಲಾತಿ ಜಾತಿ ಪಟ್ಟಿಯ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ: 30/03/2002ರ ಪ್ರವರ್ಗ-1ರ 88(ಹೆಚ್)ನಲ್ಲಿನ ತಳವಾರ (Talawara) ಜಾತಿ ಹಾಗೂ ಪ್ರವರ್ಗ-1ರ 88(ಕೆ)ನಲ್ಲಿನ ಪರಿವಾರ ನಾಯಕ (Parivara Nayaka) ಜಾತಿಗಳನ್ನು ಹಿಂದುಳಿದ ವರ್ಗಗಳ ಮೀಸಲಾತಿ ಜಾತಿ ಪಟ್ಟಿಯಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
V. Akkamahadevi 29/10/22
(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಸಂಕಲನಕಾರರು:**

ಕರ್ನಾಟಕ ರಾಜ್ಯ ಪತ್ರ – ಇವರು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ ಸದರಿ ಸಂಚಿಕೆಯ 500 ಪ್ರತಿಗಳನ್ನು ಮೇಲ್ಕಾಣಿಸಿದ ಕಛೇರಿಗೆ ಒದಗಿಸುವಂತೆ ಕೋರಲಾಗಿದೆ.